## ದಿನಾಂಕ:30-04-2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಂಖ್ಯೆ.38 ಹೆಚ್.ಎಂ.ಟಿ. ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

**ಹಾಜರಿದ್ದ ಅಧಿಕಾರಿಗಳು:**

1. ಹೆಚ್.ಭೀಮೇಶ್, ಕಾರ್ಯಪಾಲಕ ಅಭಿಯಂತರರು(ಘನತ್ಯಾಜ್ಯ ನಿರ್ವಹಣೆ ಬಿಬಿಎಂಪಿ ಹಾಗೂ ವಾ.38ರ ನೋಡಲ್ ಅಧಿಕಾರಿಗಳು)
2. ಕುಮಾರಿ. ವಸಂತ ಬಿ.ಆರ್. ಕಿರಿಯ ಅಭಿಯಂತರರು, (ವಾರ್ಡ್ ನಂ.38)
3. ನಾರಾಯಣ್, ಹಿರಿಯ ಆರೋಗ್ಯ ಪರಿವೀಕ್ಷಕರು, (ವಾರ್ಡ್ ನಂ.38)
4. ಇ. ಸಿದ್ದಯ್ಯ, ಬೆಸ್ಕಾಂ. ವಾರ್ಡ್ ನಂ.38.
5. ತನುಜಾ, ಕಿರಿಯ ಆರೋಗ್ಯ ಪರಿವೀಕ್ಷಕರು, (ವಾರ್ಡ್ ನಂ.38)
6. ಸತೀಶ್, ಕಂದಾಯ ಪರಿವೀಕ್ಷಕರು, ಹೆಚ್.ಎಂ.ಟಿ.ವಾರ್ಡ್ ನಂ.38.
7. ಬೈಲವೆಂಕಟಪ್ಪ, ಹೆಡ್ ಗ್ಯಾಂಗ್ ಮ್ಯಾನ್ ಹೆಚ್.ಎಂ.ಟಿ.ವಾರ್ಡ್ ನಂ.38.
8. ನಾಗೇಶ್ ಎಚ್. ಪ್ರೆಸಿಡೆಂಟ್, ವಾರ್ಡ್ ನಂ.38.
9. ಮೋಹಿನಿ ಬಿ.ಕೆ. ಲಿಂಕ್ ವರ್ಕರ್ ವಾರ್ಡ್ ನಂ.38.
10. ಭಾರತಿ ಎ. ಲಿಂಕ್ ವರ್ಕರ್ ವಾರ್ಡ್ ನಂ.38.
11. ಮುನಿರಾಜು ಮರ್ಷಲ್ ವಾರ್ಡ್ ನಂ.38.
12. ಮಾಯಣ್ಣ ಸೂಪರ್ ವೈಸರ್, ವಾರ್ಡ್ ನಂ.38.
13. ದೇವರಾಜು, ಗಾಬ್ರೇಜ್ ಕಂಟ್ರಾಕ್ಟರ್, ವಾರ್ಡ್ ನಂ.38.
14. ನಿಖಿಲೇಶ್, ಮರ್ಷಲ್ ವಾರ್ಡ್ ನಂ.38.
15. ಕುಮಾರ್, ಮರ್ಷಲ್ ವಾರ್ಡ್ ನಂ.38.

ಮಾನ್ಯ ಅಧ್ಯಕ್ಷರು, ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 38ರ ಕಾರ್ಯದರ್ಶಿಗಳು ಹಾಗೂ ಕಂದಾಯ ಪರಿವೀಕ್ಷಕರನ್ನು ಸಭೆಯನ್ನುದ್ದೇಶಿಸಿ ಸ್ವಾಗತ ಕೋರಿದರು.

ಆರೋಗ್ಯ ಪರಿವೀಕ್ಷಕರು ರವರು ವಾರ್ಡ್ 38ರಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚಾಗುವ ಸಾಧ್ಯತೆ ಇದ್ದು, ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಲಾಗಿರುತ್ತದೆ ಹಾಗೂ ಚುಚ್ಚುಮದ್ದು ನೀಡುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕ್ರಮಗಳು ಮುಂದುವರೆದಿರುತ್ತದೆ ಎಂದು ತಿಳಿಸಿರುತ್ತಾರೆ.

ಸಹಾಯಕ ಅಭಿಯಂತರರು ರವರು ಮಾತನಾಡಿ ಎಸ್.ಆರ್.ಎಸ್. ಸಿಗ್ನಲ್ ಬಳಿ ರಸ್ತೆ ಗುಂಡಿಗಳು ಹೆಚ್ಚಾಗಿದ್ದು, ಹಾಗೂ ಮಳೆ ನೀರು ಸರಿಯಾಗಿ ಹರಿದುಹೋಗದೆ ಸಮಸ್ಯೆಯಾಗಿದ್ದು, ಮೇಜರ್ ರೋಡ್ಸ್ ವಿಭಾಗಕ್ಕೆ ತಿಳಿಸುವುದಾಗಿ ತಿಳಿಸಿರುತ್ತಾರೆ. ಹಾಗೂ ವಾರ್ಡ್‌ನಲ್ಲಿ ರಸ್ತೆ ಗುಂಡಿಗಳನ್ನು ಪತ್ತೆ ಮಾಡಿ ಕ್ರಮ ವಹಿಸಲಾಗುವುದು ಎಂದು ತಿಳಿಸಿರುತ್ತಾರೆ.

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಕೆ.ಐ.ಎ.ಡಿ.ಬಿ. ವಸತಿ ಗೃಹದ ಕಾಂಪೌಂಡ್‌ನಲ್ಲಿರುವ ಉದ್ಯಾನವನದಲ್ಲಿ ಹೆಚ್ಚುವರಿಯಾಗಿ ಇದ್ದ ಕಸವನ್ನು ವಿಲೇವಾರಿ ಮಾಡಲಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಮು.ತಿ.ನೋ.

Scanned with CamScanner

ಕೆ.ಐ.ಎ.ಡಿ.ಬಿ. ವಸತಿ ಗೃಹದ ಕಾಂಪೌಂಡ್‌ನಲ್ಲಿರುವ ಬೀದಿ ದೀಪಗಳ ಸಮಸ್ಯೆ ಇದ್ದು, ಅದನ್ನು ಬಗೆಹರಿಸಲು ಬೀದಿ ದೀಪ ನಿರ್ವಹಣೆ ವಿಭಾಗಕ್ಕೆ ಸಮಸ್ಯೆಯನ್ನು ಬಗೆಹರಿಸಲು ತಿಳಿಸಿದರು.

ಎಸ್.ಆರ್.ಎಸ್. ಸಿಗ್ನಲ್ ಬಳಿ ರಾತ್ರಿ ಹೊತ್ತು ಕಸ ಹಾಕಲಾಗುತ್ತಿದ್ದು, ಅದನ್ನು ಪತ್ತೆ ಮಾಡಿ ಸಂಬಂಧಪಟ್ಟವರಿಂದ ದಂಡ ವಸೂಲಿ ಮಾಡಲು ಮಾರ್ಷಲ್‌ಗಳಿಗೆ ಸೂಚಿಸಲಾಯಿತು.

ಪೀಣ್ಯ ಆರ್.ಟಿ.ಓ. ಟ್ರಾಕ್ ರಸ್ತೆಯು ಹಾಳಾಗಿದ್ದು, ಅದನ್ನು ಸರಿಪಡಿಸಲು ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು.

ವಾರ್ಡಿನ ಎಲ್ಲಾ ರಸ್ತೆಗಳನ್ನು ಪರಿಶೀಲಿಸಿ ಗುಂಡಿಗಳನ್ನು ಮುಚ್ಚಲು ಮತ್ತು ಮೋರಿಗಳನ್ನು ಸ್ವಚ್ಛಮಾಡಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ವಾರ್ಡ್‌ನಲ್ಲಿನ ರಸ್ತೆಗಳಲ್ಲಿ Desilting of Drains ನ್ನು ಕೂಡಲೇ ತುರ್ತು ಕಾರ್ಯ ಯೋಜನೆಯಡಿಯಲ್ಲಿ ಎಸ್ಟಿಮೇಟ್ ಸಿದ್ಧಪಡಿಸಿ ಕೆಲಸ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಮತ್ತೊಮ್ಮೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಹೆಚ್. ಭೀಮೇಶ್, ರವರು ಎಲ್ಲಾರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

B. Sa[signature]

ಸದಸ್ಯ ಕಾರ್ಯದರ್ಶಿ ಹಾಗೂ
ಕಂದಾಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ.38

**ಪ್ರತಿಯನ್ನು:**

1. ಮಾನ್ಯ ಆಯುಕ್ತರ ಆಪ್ತ ಸಹಾಯಕರಿಗೆ ಕಳುಹಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತರುವಂತೆ ಕೋರಿದೆ.
2. ವಿಶೇಷ ಆಯುಕ್ತರು ಆಡಳಿತ ರವರ ಅವಗಾಹನಗೆ ಸಲ್ಲಿಸಿದೆ.
3. ವಲಯ ಆಯುಕ್ತರು ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು ರಾಜರಾಜೇಶ್ವರಿನಗರವಲಯ ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ರವರ ಅವಗಾಹನೆಗೆ ಸಲ್ಲಿಸಿದೆ.

Scanned with CamScanner